Akashvani: Bangalore
National Bulletin In Kannada
23.11.2024 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
23.11.2024 : 7.35AM

ಮುಖ್ಯಾಂಶಗಳು :

1. ವಿಧಾನಸಭಾ ಚುನಾವಣೆಯ ಮತ ಎಣಿಕಾ ಕಾರ್ಯಕ್ಕೆ ಇಂದು ಮಹಾರಾಷ್ಟ್ರ, ಜಾರ್ಖಂಡ್ ಸಜ್ಜು.
2. ಕರ್ನಾಟಕದಲ್ಲಿಂದು ಮೂರು ಕ್ಷೇತ್ರಗಳ ವಿಧಾನಸಭಾ ಉಪಚುನಾವಣೆಯ ಮತ ಎಣಿಕೆ ೮ ಗಂಟೆಗೆ ಆರಂಭ
3. ಭಾರತದ ಕಾರ್ಯಕ್ಷಮತೆ ಮತ್ತು ಪರಿವರ್ತನಾ ನೀತಿಗಳನ್ನು ಜಗತ್ತು ಒಪ್ಪಿಕೊಂಡಿದೆ - ಪ್ರಧಾನಿ ನರೇಂದ್ರ ಮೋದಿ
4. ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿ; ಪುರುಷರ ಡಬಲ್ಸ್ ಸೆಮಿಫೈನಲ್‌ನಲ್ಲಿಂದು ಚಿರಾಗ್ - ಸಾತ್ವಿಕ್ ಜೋಡಿ ಸ್ಪರ್ಧೆ

********

ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭೆಗಳಿಗೆ ನಡೆದ ಚುನಾವಣೆಯ ಮತಗಳ ಎಣಿಕೆ ಕಾರ್ಯ ಇಂದು ನಡೆಯಲಿದೆ. ಶಾಂತಿಯುತವಾಗಿ ಮತ ಎಣಿಕೆಯನ್ನು ಖಾತರಿಪಡಿಸಲು ಚುನಾವಣಾ ಆಯೋಗ ವ್ಯಾಪಕ ಸಿದ್ಧತೆ ಮಾಡಿಕೊಂಡಿದೆ. ಮತ ಎಣಿಕೆ ಕಾರ್ಯ ಬೆಳಗ್ಗೆ ೮ ಗಂಟೆಗೆ ಆರಂಭಗೊಳ್ಳಲಿದ್ದು, ಮೊದಲಿಗೆ ಅಂಚೆ ಮತಪತ್ರಗಳ ಎಣಿಕೆ ನಡೆಯಲಿದೆ. ನಂತರ ೮.೩೦ ಕ್ಕೆ ಇವಿಎಂ ನಲ್ಲಿನ ಮತಗಳ ಎಣಿಕೆ ನಡೆಯಲಿದೆ. ೨೮೮ ಸದಸ್ಯ ಬಲದ ಮಹಾರಾಷ್ಟ್ರ ವಿಧಾನಸಭೆಗೆ ನವೆಂಬರ್ ೨೦ ರಂದು ಮತದಾನ ನಡೆದಿತ್ತು. ನಾಂದೇಡ್ ಲೋಕಸಭಾ ಕ್ಷೇತ್ರದ ಏಕೈಕ ಉಪಚುನಾವಣೆಯ ಮತ ಎಣಿಕೆ ಕೂಡ ಇಂದು ನಿಗದಿಯಾಗಿದೆ. ವಿಧಾನಸಭೆ ಚುನಾವಣೆಗೆ ರಾಜ್ಯಾದ್ಯಂತ ಒಟ್ಟು ೨೮೮ ಮತ ಎಣಿಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ನಾಂದೇಡ್ ಲೋಕಸಭಾ ಕ್ಷೇತ್ರಕ್ಕೆ ಪ್ರತ್ಯೇಕ ಕೇಂದ್ರ ಸ್ಥಾಪಿಸಲಾಗಿದೆ. ಹೆಚ್ಚುವರಿಯಾಗಿ, ವಿಧಾನಸಭೆ ಮತ

ಎಣಿಕೆಯನ್ನು ಮೇಲ್ವಿಚಾರಣೆ ಮಾಡಲು ೨೮೮ ವೀಕ್ಷಕರನ್ನು ನಿಯೋಜಿಸಲಾಗಿದೆ, ಇಬ್ಬರು ವೀಕ್ಷಕರು ನಾಂದೇಡ್ ಲೋಕಸಭಾ ಸ್ಥಾನದ ಎಣಿಕೆ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ಮಾಡುತ್ತಾರೆ. ಕೇಂದ್ರ, ರಾಜ್ಯ ಮತ್ತು ಸ್ಥಳೀಯ ಭದ್ರತಾ ಪಡೆಗಳು ಮತ ಎಣಿಕೆ ಕೇಂದ್ರಗಳಲ್ಲಿ ಬೀಡುಬಿಟ್ಟಿವೆ.

********

ಕರ್ನಾಟಕ ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಇದೇ ತಿಂಗಳ ೧೩ರಂದು ನಡೆದ ಉಪ ಚುನಾವಣೆಯ ಮತ ಎಣಿಕೆ ಕಾರ್ಯ ಇಂದು ನಡೆಯಲಿದೆ. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದಿಂದ ರಾಮನಗರದ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ, ಹಾವೇರಿಯ ಶಿಗ್ಗಾಂವಿ ಹಾಗೂ ಬಳ್ಳಾರಿಯ ಸಂಡೂರಿನಲ್ಲಿ ಮತ ಎಣಿಕೆಗೆ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ಆಯೋಗದ ಮಾರ್ಗಸೂಚಿಯಂತೆ ಇಂದು ಬೆಳಿಗ್ಗೆ ೮ ಗಂಟೆಯಿಂದ ಮತ ಎಣಿಕೆ ಪ್ರಕ್ರಿಯೆ ಆರಂಭಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಮೊದಲಿಗೆ ಅಂಚೆ ಮತಗಳ ಎಣಿಕೆ ಕಾರ್ಯ ನಡೆಯಲಿದ್ದು, ನಂತರ ವಿದ್ಯುನ್ಮಾನ ಯಂತ್ರಗಳ ಮತ ಎಣಿಕೆ ನಡೆಯಲಿದೆ. ಮತ ಎಣಿಕಾ ಕೇಂದ್ರಗಳಲ್ಲಿ ಮೇಲ್ವಿಚಾರಕರು, ಎಣಿಕೆ ಸಹಾಯಕರು, ಸೂಕ್ಷ್ಮ ವೀಕ್ಷಕರನ್ನು ನಿಯೋಜಿಸಲಾಗಿದ್ದು, ಮತ ಎಣಿಕೆ ಕೇಂದ್ರದ ಸುತ್ತಮುತ್ತಲಿನ ೨೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಶಿಗ್ಗಾಂವಿಯಲ್ಲಿ ಪ್ರಮುಖವಾಗಿ ಎನ್‌ಡಿಎ ಅಭ್ಯರ್ಥಿ ಭರತ್ ಬೊಮ್ಮಾಯಿ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಯಾಸಿರ್ ಅಹಮದ್ ಖಾನ್ ಪಠಾಣ್, ಚನ್ನಪಟ್ಟಣದಲ್ಲಿ ಪ್ರಮುಖವಾಗಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್, ಸಂಡೂರಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಇ.ಅನ್ನಪೂರ್ಣ ಹಾಗೂ ಎನ್‌ಡಿಎ ಅಭ್ಯರ್ಥಿ ಬಂಗಾರು ಹನುಮಂತು ಅವರ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ.

********

ಒಡಿಶಾದ ಇತಿಹಾಸದ ಪ್ರಮುಖ ಭಾಗವಾಗಿರುವ ಕಳಿಂಗ ಯುದ್ಧ ಜಗತ್ತಿಗೆ ಶಾಂತಿಯ ಮಾರ್ಗವನ್ನು ತೋರಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯ ಜೆಎಲ್‌ಎನ್ ಕ್ರೀಡಾಂಗಣದಲ್ಲಿ ನಿನ್ನೆ ಸಂಜೆ ಮೂರು ದಿನಗಳ ಒಡಿಶಾ ಪರ್ಬಾ ಕಾರ್ಯಕ್ರಮವನ್ನು ಉದ್ಘಾಟಿಸಿದ ರಾಷ್ಟ್ರಪತಿಗಳು, ಈ ಯುದ್ಧ, ರಾಷ್ಟ್ರದ ಪ್ರಗತಿಗೆ ಶಾಂತಿ ಮುಖ್ಯ ಎಂಬುವುದನ್ನು

ತಿಳಿಸುತ್ತದೆ. ಇಂದು ವಿಶ್ವದ ಹಲವೆಡೆ ಸಂಘರ್ಷಗಳು ನಡೆಯುತ್ತಿದ್ದು, ಇದಕ್ಕೆ ಶಾಂತಿಯೇ ಪರಿಹಾರವಾಗಬೇಕು. ಸಹಿಷ್ಣುತೆಯೇ ಒಡಿಶಾದ ಸಂಸ್ಕೃತಿಯ ಪ್ರಮುಖ ಅಂಶವಾಗಿದೆ ಎಂದರು. ಒಡಿಶಾದ ಕಲೆ, ಸಾಹಿತ್ಯ, ನೃತ್ಯ, ಸಂಗೀತ ಮತ್ತು ಪಾಕಪದ್ಧತಿಯ ಶ್ರೀಮಂತ ಪರಂಪರೆಯ ಬಗ್ಗೆ ಜನರಿಗೆ ಅರಿವು ಮೂಡಿಸುವಲ್ಲಿ ಒಡಿಶಾ ಪರ್ಬಾ ಪ್ರಮುಖ ಪಾತ್ರ ವಹಿಸಿದೆ ಎಂದು ರಾಷ್ಟ್ರಪತಿ ತಿಳಿಸಿದರು.

********

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹಾಗೂ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಮನ್ಸುಖ್ ಮಾಂಡವಿಯಾ ನಿನ್ನೆ ನವದೆಹಲಿಯಲ್ಲಿ ಉದ್ಯೋಗಗಳು ನಿಮ್ಮ ಮನೆ ಬಾಗಿಲಿಗೆ ಎಂಬ ವರದಿಯನ್ನು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಧರ್ಮೇಂದ್ರ ಪ್ರಧಾನ್, ಆರು ರಾಜ್ಯಗಳ ವಿವರವಾದ ವರದಿಗಾಗಿ ವಿಶ್ವಬ್ಯಾಂಕ್ ತಂಡವನ್ನು ಶ್ಲಾಘಿಸಿದರು. ತಾಂತ್ರಿಕ ಅಡೆತಡೆಗಳು ಉದ್ಯೋಗಗಳು ಮತ್ತು ಆರ್ಥಿಕ ಚಟುವಟಿಕೆಗಳ ಸ್ವರೂಪವನ್ನು ಬದಲಾಯಿಸುತ್ತವೆ ಮತ್ತು ಭವಿಷ್ಯಕ್ಕಾಗಿ ಉದ್ಯೋಗಿಗಳನ್ನು ನಿರಂತರವಾಗಿ ಕೌಶಲ್ಯವನ್ನು ಹೆಚ್ಚಿಸುವುದು ಅಗತ್ಯವಾಗಿದೆ ಎಂದು ಹೇಳಿದರು. ಸಚಿವ ಡಾ. ಮನ್ಸುಖ್ ಮಾಂಡವೀಯ ಮಾತನಾಡಿ, ಕಳೆದ ಬಜೆಟ್‌ನಲ್ಲಿ, ಪ್ರದೇಶ-ನಿರ್ದಿಷ್ಟ ಕೌಶಲ್ಯ ಮತ್ತು ಉದ್ಯೋಗದ ಸಾಮರ್ಥ್ಯವನ್ನು ಬಳಸಿಕೊಳ್ಳಲು ಪಠ್ಯಕ್ರಮವನ್ನು ಅಭಿವೃದ್ಧಿಪಡಿಸಲು ಪ್ರಸ್ತಾಪಿಸಲಾಗಿದೆ ಎಂದು ಪ್ರತಿಪಾದಿಸಿದರು.

********

ಅಮೆರಿಕ ಅಧ್ಯಕ್ಷರಾಗಿ ಆಯ್ಕೆಯಾದ ಡೊನಾಲ್ಡ್ ಟ್ರಂಪ್ ಅವರು ಸ್ಕಾಟ್ ಬೆಸೆಂಟ್ ಅವರನ್ನು ಖಜಾನೆ ಕಾರ್ಯದರ್ಶಿಯಾಗಿ ನಾಮನಿರ್ದೇಶನ ಮಾಡಿದ್ದಾರೆ. ಕೀ ಸ್ಕ್ವೇರ್ ಗ್ರೂಪ್‌ನ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಅನುಭವಿ ಹೂಡಿಕೆದಾರರಾದ ಬೆಸೆಂಟ್, ತೆರಿಗೆ ಕಡಿತ, ಫೆಡರಲ್ ಕೊರತೆಯನ್ನು ಪರಿಹರಿಸುವುದು ಸೇರಿದಂತೆ ಟ್ರಂಪ್‌ರ ಆರ್ಥಿಕ ಕಾರ್ಯಸೂಚಿಯನ್ನು ಮುನ್ನಡೆಸುವ ನಿರೀಕ್ಷೆ ಇದೆ. ಬೆಸ್ಸೆಂಟ್ ಅವರನ್ನು ಉನ್ನತ ಆರ್ಥಿಕ ತಂತ್ರಜ್ಞ ಎಂದು ಶ್ಲಾಘಿಸಿದ ಟ್ರಂಪ್, ಬೆಸ್ಸೆಂಟ್ ಅಮೆರಿಕ ಆರ್ಥಿಕತೆಯ ಸುವರ್ಣ ಯುಗಕ್ಕೆ ಚಾಲನೆ ನೀಡಲು ಮಹತ್ವದ ಪಾತ್ರವಹಿಸಲಿದ್ದಾರೆ ಎಂದು ಹೇಳಿದರು.

********

ಕಳೆದ ಹತ್ತು ವರ್ಷಗಳಿಂದ ಕೇಂದ್ರ ಸರ್ಕಾರ ಸುಧಾರಣೆ, ಕಾರ್ಯಕ್ಷಮತೆ ಮತ್ತು ಪರಿವರ್ತನೆಯ ನೀತಿಯೊಂದಿಗೆ ಜಾರಿಗೊಳಿಸುತ್ತಿರುವ ಹಲವಾರು ಕಾರ್ಯಕ್ರಮಗಳಿಂದಾಗಿ ಜಗತ್ತು ಇಂದು ಭಾರತದ ಕಾರ್ಯತಂತ್ರವನ್ನು ಒಪ್ಪಿಕೊಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಜರ್ಮನಿ-ಭಾರತ; ಸುಸ್ಥಿರ ಬೆಳವಣಿಗೆಗೆ ಮಾರ್ಗಸೂಚಿ ಎಂಬ ವಿಷಯದ ಮೇಲೆ ಜರ್ಮನಿಯ ಸ್ಟಟ್‌ಗಾರ್ಟ್‌ನ ಸುದ್ದಿ ಸಂಸ್ಥೆಯೊಂದಕ್ಕೆ ವಿಡಿಯೋ ಕಾನ್ಫರೆನ್ಸ್ ಮೂಲಕ ನೀಡಿದ ಸಂದರ್ಶನದಲ್ಲಿ ಅವರು, ಭಾರತ ವಿಶ್ವದಲ್ಲೇ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿದ್ದು, ಅಭಿವೃದ್ಧಿಗಾಗಿ ವಿವಿಧ ದೇಶಗಳು ಭಾರತದೊಂದಿಗೆ ಪಾಲುದಾರಿಕೆ ವಹಿಸುತ್ತವೆ. ಇದಕ್ಕೆ ಜರ್ಮನಿಯ ಫೋಕಸ್ ಆನ್ ಇಂಡಿಯಾ ಉದಾಹರಣೆಯಾಗಿದೆ ಎಂದರು. ಜರ್ಮನಿ ಹಾಗೂ ಭಾರತದ ನಡುವಿನ ಕಾರ್ಯತಂತ್ರದ ಪಾಲುದಾರಿಕೆ ಬಲಗೊಳ್ಳುತ್ತಾ ಸಾಗಿದೆ. ಸುಮಾರು ಒಂದು ಸಾವಿರದ ೮೦೦ಕ್ಕೂ ಅಧಿಕ ಜರ್ಮನಿ ಕಂಪನಿಗಳು ಭಾರತದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಕಳೆದ ಮೂರ್ನಾಲ್ಕು ವರ್ಷಗಳಲ್ಲಿ ೧೫ ಶತಕೋಟಿ ಡಾಲರ್‌ಗೂ ಅಧಿಕ ಮೊತ್ತ ಹೂಡಿಕೆ ಮಾಡಿವೆ ಎಂದು ಹೇಳಿದರು.

ಭಾರತ ವಿವಿಧ ಕ್ಷೇತ್ರಗಳಲ್ಲಿ ಹೊಸ ಹೊಸ ನೀತಿಗಳನ್ನು ಪರಿಚಯಿಸಿದೆ ಹಾಗೂ ೨೧ನೇ ಶತಮಾನದಲ್ಲಿ ತ್ವರಿತ ಬೆಳವಣಿಗೆ ಸಾಧಿಸಲು ಸಿದ್ಧಗೊಂಡಿದೆ. ಹಾಗೆಯೇ ವಿಕಸಿತ ಭಾರತ ನಿರ್ಮಾಣಕ್ಕಾಗಿ ಭದ್ರ ಬುನಾದಿ ಹಾಕಲಾಗಿದೆ ಎಂದು ಪ್ರಧಾನಿ ತಿಳಿಸಿದರು.

********

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ಭಾನುವಾರ ೨೪ ರಂದು ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು ಮನ್ ಕಿ ಬಾತ್‌ನ ೧೧೬ನೇ ಅವತರಣಿಕೆಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಪ್ರಸಾರವಾಗಲಿದೆ. ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ

ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಹಿಂದಿ ಭಾಷೆಯ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

********

ಕುಟುಂಬದಲ್ಲಿ ಒಂದೇ ಹೆಣ್ಣು ಮಗುವಾಗಿರುವ, ೧೦ನೇ ತರಗತಿಯಲ್ಲಿ ಉತ್ತೀರ್ಣರಾಗಿ ಸಿಬಿಎಸ್‌ಇ ಸಂಯೋಜಿತ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿನಿಯರಿಗೆ - ೨೦೨೪ನೇ ಸಾಲಿನ ಮೆರಿಟ್ ವಿದ್ಯಾರ್ಥಿ ವೇತನಕ್ಕಾಗಿ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ ಸಿಬಿಎಸ್‌ಇ ಅರ್ಜಿ ಆಹ್ವಾನಿಸಿದೆ. ಅರ್ಜಿಗಳನ್ನು ಸಲ್ಲಿಸಲು ಮುಂದಿನ ತಿಂಗಳು ೨೩ ಕೊನೆಯ ದಿನವಾಗಿದ್ದು, ಹೆಚ್ಚಿನ ವಿವರಗಳನ್ನು ಸಿಬಿಎಸ್‌ಇಯ ಜಾಲತಾಣದಲ್ಲಿ ಪಡೆಯಬಹುದಾಗಿದೆ.

********

ಇಂದು ವಿಧಾನಸಭಾ ಮತ ಎಣಿಕೆ ಹಿನ್ನೆಲೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ನಿನ್ನೆ ಪಕ್ಷದ ಮುಖಂಡರೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ಪಕ್ಷದ ಕಾರ್ಯದರ್ಶಿಗಳಾದ ಬಿ.ಎಲ್. ಸಂತೋಷ್, ವಿನೋದ್ ತಾವಡೆ, ಅರುಣ್ ಸಿಂಗ್ ಮತ್ತು ದುಷ್ಯಂತ್ ಗೌತಮ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಏತನ್ಮಧ್ಯೆ, ಚುನಾವಣೋತ್ತರ ಪರಿಸ್ಥಿತಿಯ ಮೇಲ್ವಿಚಾರಣೆಗಾಗಿ ಕಾಂಗ್ರೆಸ್ ವೀಕ್ಷಕರನ್ನು ನೇಮಿಸಿದೆ.

********

ಐದು ದಿನಗಳ ನೇಪಾಳ ಪ್ರವಾಸದಲ್ಲಿರುವ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ನಿನ್ನೆ ನೇಪಾಳ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಹಾಗೂ ರಕ್ಷಣಾ ಸಚಿವ ಮನ್ಬೀರ್ ರೈ ಅವರನ್ನು ಭೇಟಿಯಾಗಿ ಭಾರತ - ನೇಪಾಳ ದ್ವಿಪಕ್ಷೀಯ ರಕ್ಷಣಾ ಸಹಕಾರದ ಕುರಿತು ಸಮಾಲೋಚನೆ ನಡೆಸಿದರು. ಈ ವೇಳೆ ಅವರು, ಭಾರತ - ನೇಪಾಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸಲು ಎಲ್ಲಾ ಸಹಕಾರವನ್ನು ನೀಡಲು ಬದ್ಧವಿರುವುದಾಗಿ ತಿಳಿಸಿದರು. ಇದೇ ವೇಳೆ ನೇಪಾಳ ಪ್ರಧಾನಿ ಕೆ.ಪಿ. ಶರ್ಮಾ ಓಲಿ, ಉಭಯ ರಾಷ್ಟ್ರಗಳ ದ್ವಿಪಕ್ಷೀಯ ಸಹಕಾರ ಮತ್ತಷ್ಟು ಬಲಗೊಳ್ಳುವ ಅಗತ್ಯವನ್ನು ಒತ್ತಿ ಹೇಳಿದರು.

********

ಚೀನಾದ ಶೆನ್‌ಜೆನ್‌ನಲ್ಲಿ ನಡೆಯುತ್ತಿರುವ ಚೀನಾ ಮಾಸ್ಟರ್ಸ್ ೨೦೨೪ ಟೂರ್ನಿಯ ಪುರುಷರ ಡಬಲ್ಸ್ ಸೆಮಿಫೈನಲ್ ಬ್ಯಾಡ್ಮಿಂಟನ್ ಪಂದ್ಯದಲ್ಲಿಂದು ,ಭಾರತದ ದಿಗ್ಗಜ ಜೋಡಿ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಅವರು ದಕ್ಷಿಣ ಕೊರಿಯಾದ ಜಿನ್ ಯೋಂಗ್ ಮತ್ತು ಸಿಯೊ ಸೆಯುಂಗ್ ಜೇ ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಭಾರತದ ಜೋಡಿ ಡ್ಯಾನಿಶ್ ಜೋಡಿ, ಕಿಮ್ ಆಸ್ಟ್ರುಪ್ ಮತ್ತು ಆಂಡರ್ಸ್ ಸ್ಕಾರಪ್ ರಾಸ್ಮುಸ್ಸೆನ್ ಅವರನ್ನು ೨೧-೧೬, ೨೧-೧೯ ರಿಂದ ಸೋಲಿಸಿತು.

********

ಬಾರ್ಡರ್-ಗವಾಸ್ಕರ್ ಟ್ರೋಫಿಯ ಆರಂಭಿಕ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಭಾರತ ನಿನ್ನೆ, ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೪೯.೪ ಓವರ್‌ಗಳಲ್ಲಿ ಕೇವಲ ೧೫೦ ರನ್‌ಗಳಿಗೆ ಸರ್ವಪತನ ಕಂಡಿತು.  ಭಾರತದ ಪರ ಎನ್.ಕೆ.ರೆಡ್ಡಿ ೪೧ ರನ್, ರಿಷಬ್‌ಪಂತ್ ೩೭ ಹಾಗೂ ಕೆ.ಎಲ್.ರಾಹುಲ್ ೨೬ ರನ್ ಗಳಿಸಿದರು. ಆಸ್ಟ್ರೇಲಿಯಾ ಪರ ಹಾಜಲ್‌ವುಡ್ ೨೯ ರನ್‌ಗಳಿಗೆ ನಾಲ್ಕು ವಿಕೆಟ್ ಪಡೆಯುವ ಮೂಲಕ ಯಶಸ್ವಿ ಬೌಲರ್ ಎನಿಸಿದರು.  ಮೊದಲ ಇನ್ನಿಂಗ್ಸ್ ಆರಂಭಿಸಿದ ಆಸ್ಟ್ರೇಲಿಯಾ, ದಿನದ ಅಂತ್ಯಕ್ಕೆ  ೭ ವಿಕೆಟ್ ನಷ್ಟಕ್ಕೆ ೬೭ ರನ್ ಮಾಡಿದೆ. ಭಾರತದ ಪರ ಜಸ್‌ಪ್ರೀತ್ ಬೂಮ್ರಾ ೪ ವಿಕೆಟ್, ಮೊಹಮ್ಮದ್ ಸಿರಾಜ್ ೨ ವಿಕೆಟ್ ಮತ್ತು ಹರ್ಷಿತ್ ರಾಣಾ ೧ ವಿಕೆಟ್ ಪಡೆದರು. ಇಂದು ಎರಡನೇ ದಿನದಾಟ ಮುಂದುವರಿಯಲಿದೆ.

*******